# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5ಜಿ)/ಪಿಆರ್/60/2021-22
eoffice No. 13851

ಮುಖ್ಯ ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 4/9/21

## ಕಛೇರಿ ಆದೇಶ

ವಿಷಯ: ಶ್ರೀ ಎನ್. ರಾಜೇಶ್, ತಪಾಸಕರು, ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಕಂದಾಯ ಇಲಾಖೆಯ (ಭೂಮಾಪನ) ಅಧಿಕೃತ ಜ್ಞಾಪನ ಸಂಖ್ಯೆ: ಕಂಇ 173 ಎಫ್‌ಎಲ್‌ಆರ್ 2021, ದಿನಾಂಕ: 22-07-2021.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಎನ್. ರಾಜೇಶ್, ತಪಾಸಕರು, ಸರ್ಕಾರದ ಕಂದಾಯ ಇಲಾಖೆ (ಭೂಮಾಪನ) ಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಉಪ ಆಯುಕ್ತರು (ಭೂಸ್ವಾಧೀನ ಮತ್ತು ಟಿ.ಡಿ.ಆರ್) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರನ್ನು ಉಲ್ಲೇಖಿತದ ಅಧಿಕೃತ ಜ್ಞಾಪನದಲ್ಲಿ ತಪಾಸಕರು, ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಛೇರಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು – ಶ್ರೀ ಸಿ.ಆರ್. ಬಸವರಾಜು ಇವರ ಸ್ಥಳಕ್ಕೆ ವರ್ಗಾವಣೆ ಮಾಡಲಾಗಿರುವುದನ್ನು ಪರಿಗಣಿಸಿ, ಸದರಿಯವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಿ, ಮಾತೃ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

**ಷರತ್ತುಗಳು:**

1. ಸದರಿಯವರು ನಗರ ಪಾಲಿಕೆಯ ಸೇವಾವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿ ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿಯವರ ವಿರುದ್ಧ ಯಾವುದೇ ಇಲಾಖಾ / ಲೋಕಾಯುಕ್ತ / ಸಿ.ಐ.ಡಿ. ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮ ಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಯವರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ಸದರಿಯವರು ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್ ಹಾಗೂ ಲ್ಯಾಪ್‌ಟಾಪ್‌ಗಳನ್ನು ಪಡೆದಿದ್ದಲ್ಲಿ ಅವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮಾನ್ಯ ಮುಖ್ಯ ಆಯುಕ್ತರವರ ಆದೇಶದಂತೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

2/9/2021 3/9/21

ಪ್ರತಿಯನ್ನು: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತಶಾಖೆಗೆ ರವರಿಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ರವರಿಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ/ಆಡಳಿತ/ಆಸ್ತಿಗಳು/ಹಣಕಾಸು) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಉಪ ಆಯುಕ್ತರು (ಭೂಸ್ವಾಧೀನ ಮತ್ತು ಟಿ.ಡಿ.ಆರ್) ರವರಿಗೆ ಕಳುಹಿಸಿದೆ.
: ಭೂದಾಖಲೆಗಳ ಸಹಾಯಕ ನಿರ್ದೇಶಕರು, ಚಿಕ್ಕನಾಯನಹಳ್ಳಿ ತಾಲ್ಲೂಕು ರವರಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್ ಮತ್ತು ಸಿಮ್‌ಕಾರ್ಡ್‌ನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು ಹಾಗೂ ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಮು.ಲೆ.ಅ / ಮು.ಲೆ.ಪ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ನೌಕರರಿಗೆ / ಕಛೇರಿ ಪ್ರತಿ.

387 13/9/21

1.F7&V